ಮಹಿಳಾ ಅಭಿವೃದ್ಧಿ ನಿಗಮ ನಿಯಮಿತದ ಪುರನ್‌ರಚನೆ

1418 (2016) - ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಹಿಳಾ ಅಭಿವೃದ್ಧಿ ನಿಗಮ ನಿಯಮಿತವನ್ನು ಪುನರ್ ರಚನೆ ಮಾಡುವ ಪ್ರಸ್ತಾವನೆ ಏನಾದರೂ ಸರ್ಕಾರದ ಮುಂದೆ ಇದೆಯೇ?

ಆ) ಹಾಗಿದ್ದಲ್ಲಿ, ಆ ಬಗ್ಗೆ ಕೈಗೊಂಡ ಕ್ರಮಗಳೇನು?

ಇ) ಎಷ್ಟು ಸಮಯದೊಳಗಾಗಿ ಈ ಕಾರ್ಯವನ್ನು ಪೂರ್ಣ ಮಾಡಲಾಗುವುದು?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯವರು):

ಅ) ಇದೆ.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಶೀಘ್ರದಲ್ಲಿ ಪೂರ್ಣಗೊಳಿಸಲಾಗುವುದು.

ಸ್ತ್ರೀ ಶಕ್ತಿ ಯೋಜನೆಯ ಹಣದಲ್ಲಿ ಕುರಿತ

1419 (2018) - ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸ್ತ್ರೀ ಶಕ್ತಿ ಯೋಜನೆಯು ಅನುಷ್ಠಾನಕ್ಕೆ ಬಂದಂದಿನಿಂದ ಇಲ್ಲಿಯವರೆಗೆ ಸರ್ಕಾರ ಎಷ್ಟು ಹಣ ಬಿಡುಗಡೆ ಮಾಡಿದೆ (ಜಿಲ್ಲಾವಾರು ವಿವರಗಳನ್ನು ನೀಡುವುದು)

ಆ) ಬಿಡುಗಡೆಯಾದ ಹಣದಲ್ಲಿ ಎಷ್ಟು ಪ್ರಮಾಣದ ಹಣವನ್ನು ಹಿಂತೆಗೆದುಕೊಳ್ಳಲಾಗಿದೆ?

ಶ್ರೀಮತಿ ಮೋಟಮ್ಮ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು):

ಅ) 2000-01ರ ಸಾಲಿನಲ್ಲಿ 850.00 ಲಕ್ಷ ರೂಗಳನ್ನು ಹಾಗೂ 2001-02ನೇ ಸಾಲಿನಲ್ಲಿ 2201-00 ಲಕ್ಷ ರೂಗಳನ್ನು ಸರ್ಕಾರವು ಆಯವ್ಯಯದಲ್ಲಿ ನಿಗದಿಪಡಿಸಿದೆ.

ಒಟ್ಟು 3051.00 ಲಕ್ಷ ರೂಗಳನ್ನು ಬಿಡುಗಡೆ ಮಾಡಿದೆ. ಜಿಲ್ಲಾವಾರು ವಿವರಗಳನ್ನು ಅನುಬಂಧ-1 ಮತ್ತು 2 ರಲ್ಲಿ ನೀಡಲಾಗಿದೆ.

ಆ) 2001-02ರ ಸಾಲಿನಲ್ಲಿ 1013.30 ಲಕ್ಷ ರೂಗಳನ್ನು ಹಿಂತೆಗೆದುಕೊಳ್ಳಲಾಗಿದೆ. ಈ ಪೈಕಿ 169.00 ಲಕ್ಷ ರೂಗಳನ್ನು ವಿಶೇಷ ಘಟಕ ಯೋಜನೆ ಯಿಂದ ಕಲೆ ಹಾಕಿ ಸಮಾಜ ಕಲ್ಯಾಣ ಇಲಾಖೆಗೆ ನೀಡಲಾಗಿದೆ.